ರಿಂದ ಪ್ರಾರಂಭವಾಗಿದ್ದು, ಪ್ರತಿ ವರ್ಷವೂ 10 ಯುವಜನರಿಗೆ ಹಾಗೂ ಎರಡೂ ಯುವ ಸಂಘಗಳಿಗೆ ಈ ಪ್ರಶಸ್ತಿಯನ್ನು ನೀಡಲಾಗುತ್ತಿದೆ. ವೈಯಕ್ತಿಕ ರಾಜ್ಯ ಯುವ ಪ್ರಶಸ್ತಿಗೆ ರೂ. 5000-00 ನಗದು ಬಹುಮಾನ ಹಾಗೂ ಯುವಕ ಸಂಘಗಳಿಗೆ ಪ್ರಶಸ್ತಿಗಾಗಿ ರೂ. 25,000-00 ನಗದು ಬಹುಮಾನ ಕೊಡಲಾಗುತ್ತಿದೆ. 1996-97ನೇ ಸಾಲಿನಲ್ಲಿ ಈ ಕಾರ್ಯಕ್ರಮ ಅನುಷ್ಠಾನಗೊಳಿಸಲು ಸರ್ಕಾರ ರೂ. 1.60 ಲಕ್ಷಗಳನ್ನು ನಿಗಧಿಪಡಿಸಲಾಗಿದ್ದು. ಮಾರ್ಚ್ 17ರಂದು ಧಾರವಾಡದಲ್ಲಿ ನಡೆದ ರಾಜ್ಯ ಯುವ ಪ್ರಶಸ್ತಿ ಪ್ರಧಾನ ಸಮಾರಂಭದಲ್ಲಿ ವಿನಿಯೋಗಿಸಲಾಗಿದೆ. ಕೇಂದ್ರ ಸರ್ಕಾರದ ರಾಷ್ಟ್ರ ಯುವ ಪ್ರಶಸ್ತಿಗೆ ಸೂಕ್ತ ಅಭ್ಯರ್ಥಿಗಳನ್ನು ಆಯ್ಕೆ ಮಾಡಿ ಕಳುಹಿಸಲಾಗುತ್ತಿದೆ.

7. ಯುವಜನ ಸಂಘಗಳು :

ರಾಜ್ಯಾದ್ಯಂತ ಹಳ್ಳಿಗಳಲ್ಲಿ ಹಾಗೂ ನಗರ ಪ್ರದೇಶಗಳಲ್ಲಿ 15106 ಯುವಕ:ಯುವತಿ ಸಂಘಗಳನ್ನು ಸ್ಥಾಪಿಸಲಾಗಿದೆ. ಕ್ರೀಡಾ, ಸಾಂಸ್ಕೃತಿಕ ಸಾಹಿತ್ಯ ವ್ಯವಸಾಯದ ನಗರ ಅಭಿವೃದ್ಧಿ ಮುಂತಾದ ಸಮಾಜ ಸೇವಾ ಕಾರ್ಯಕ್ರಮಗಳನ್ನು ಹಮ್ಮಿಕ್ಕೊಂಡು ಸಮಾಜದ ಅಭಿವೃದ್ಧಿಗೆ ಶ್ರಮಿಸಲು ಪೂರಕವಾಗುವಂತೆ ಆ ಸಂಘಗಳನ್ನು ಸ್ಥಾಪಿಸಲಾಗಿದೆ. ಉತ್ತಮ ಕಾರ್ಯ ನಿರ್ವಹಿಸುತ್ತಿರುವ ಸಂಘಗಳಿಗೆ ಸಲಕರಣೆಗೊಳ್ಳಲು ಗರಡಿ ಮನೆ ರಂಗಮಂದಿರ ನಿರ್ಮಿಸಲು ಕ್ರೀಡಾ ಸಾಂಸ್ಕೃತಿಕ ಉಪಕರಣಗಳನ್ನು ಕೊಳ್ಳಲು ಹಾಗೂ ಯುವಕ ಸಂಘಗಳ ಕಟ್ಟಡ ನಿರ್ಮಿಸಲು ಸಂಬಂಧಪಟ್ಟ ಜಿಲ್ಲಾ ಪರಿಷತ್ ವತಿಯಿಂದ ಅನುದಾನ ಕೊಡಲಾಗುತ್ತಿದೆ. ವಿಶೇಷ ಘಟಕ ಯೋಜನೆ ಅಡಿಯಲ್ಲಿ ಒಂದು ಜಿಲ್ಲೆಗೆ2 ಯುವಕ : ಯುವತಿ ಸಂಘಗಳಿಗೆ ರೂ. 1.00 ಲಕ್ಷವನ್ನು ಒಂದು ಸಂಘಕೆ ಕಟ್ಟಡಕ್ಕಾಗಿ ನೀಡಲಾಗುತ್ತಿದೆ. ಜಿಲ್ಲಾ ಪರಿಷತ್ ಯೋಜನೆ ಅಡಿಯಲ್ಲಿ ಒಟ್ಟು ರೂ. 32.55 ಲಕ್ಷಗಳನ್ನು ಹಾಗೂ ಯೋಜನೇತರ ಅಡಿಯಲ್ಲಿ ರೂ.8.35 ಲಕ್ಷಗಳನ್ನು ಯುವಜನ ಸಂಘಗಳ ಅನುದಾನಕ್ಕಾಗಿ ಮೀಸಲಿಡಲಾಗಿದೆ.

ಇ) , ಕೊಡಗು ಜಿಲ್ಲೆಯ ಸೋಮವಾರಪೇಟೆ ತಾಲ್ಲೂಕು ಕೊಡಿಗೆಯಲ್ಲಿ ಕ್ರೀಡಾ ಶಾಲೆಯನ್ನು ನಡೆಸಲಾಗುತ್ತಿದ್ದು ಕೊಡಗು ಜಿಲ್ಲೆಯನ್ನು ಹಾಕಿ ಕ್ರೀಡೆಯಲ್ಲಿ ಹೆಚ್ಚು ಆಸಕ್ತಿ ಇರುವುದನ್ನು ಗಮನಿಸಿ ,ಹಾಕಿ ಕ್ರೀಡೆಯನ್ನು ಪ್ರಾರಂಭಿಸಲಾಗಿದೆ. ಕೊಡಗು ಜಿಲ್ಲೆಯನ್ನು ಸೇರಿ ರಾಜ್ಯದ ಇತರೆ ಜಿಲ್ಲೆಗಳಿಂದ ಆಯ್ಕೆಯಾದ ಪ್ರತಿಭಾವಂತ ಕ್ರೀಡಾಪಟುಗಳಿಗೆ ಫುಟ್‌ಬಾಲ್ ಕ್ರೀಡೆಯಲ್ಲಿ ಬೆಂಗಳೂರಿನ ವಿದ್ಯಾನಗರ ಕ್ರೀಡಾ ಶಾಲೆಯಲ್ಲಿ ತರಬೇತಿಯನ್ನು ನೀಡಲಾಗುತ್ತಿದೆ.

ಕೊಡಗಿನ ಕೆಲವು ಕಛೇರಿಯಲ್ಲಿ ಆಂಗ್ಲ ಭಾಷೆಯಲ್ಲಿ ಆಡಳಿತ

1012 - ಶ್ರೀ ಹೆಚ್.ಡಿ. ಬಸವರಾಜ್ (ವೀರಾಜಪೇಟೆ) : ಮಾನ್ಯ ಪ್ರವಾಸೋದ್ಯಮ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೊಡಗಿನ ಕೆಲ ಕಛೇರಿಗಳಲ್ಲಿ ಇಂದಿಗೂ ಆಂಗ್ಲ ಭಾಷೆ ಆಡಳಿತ ಭಾಷೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) *ಹಾಗಿದ್ದಲ್ಲಿ ಸರ್ಕಾರ ಆಡಳಿತ ಭಾಷೆಯಾದ ಕನ್ನಡವನ್ನು ಎಲ್ಲಾ ಹಂತದಲ್ಲೂ ಅನುಷ್ಠಾನಗೊಳಿಸಲು ಕೈಗೊಂಡಿರುವ ಕ್ರಮವೇನು?*

ಶ್ರೀಮತಿ ಲೀಲಾದೇವಿ ಆರ್. ಪ್ರಸಾದ್ (ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು):

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಮಿನಿ ಸಿಗರೇಟ್‌ನಿಂದ ಬೀಡಿ ಕಾರ್ಮಿಕರಿಗೆ ತೊಂದರೆ

1020 - ಶ್ರೀ ಕೆ.ಎಸ್. ಈಶ್ವರಪ್ಪ (ಶಿವಮೊಗ್ಗ) : ಮಾನ್ಯ ಉಪ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಪ್ರಸ್ತುತ ಮಾರುಕಟ್ಟೆಯಲ್ಲಿ ಮಿನಿ ಸಿಗರೇಟ್ ಬಂದಿರುವುದರಿಂದ ಬೀಡಿ ಕಾರ್ಮಿಕರ ಜೀವನಕ್ಕೆ ತೊಂದರೆಯಾಗುತ್ತಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?*

ಆ) *ಇದಕ್ಕೆ ರಾಜ್ಯ ಸರ್ಕಾರದ ಪರಿಹಾರವೇನು?*

ಶ್ರೀ ಸಿದ್ದರಾಮಯ್ಯ (ಉಪ ಮುಖ್ಯಮಂತ್ರಿಯವರು) :

ಅ) ಹೌದು.

ಆ) ಈ ವಿಷಯವು ಕೇಂದ್ರ ಸರ್ಕಾರದ ವ್ಯಾಪ್ತಿಯಲ್ಲಿ ಬರುತ್ತದೆ.

ಜಿಲ್ಲಾ ನ್ಯಾಯಾಧೀಶರನ್ನು ನೇಮಿಸುವಾಗ ಪೋಲಿಸ್ ವರದಿ ಪಡೆಯದೇ ಇರುವುದು

1027 - ಡಾ|| ಎಂ. ಪಿ. ಕರ್ಕಿ (ಕುಮಟಾ) : ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಜಿಲ್ಲಾ ನ್ಯಾಯಾಧೀಶರನ್ನು ನಿಯಮಿಸುವಾಗ ಪೊಲೀಸರ ರಿಪೋರ್ಟ್ ತೆಗೆದುಕೊಳ್ಳದ್ದರಿಂದ ಅಪರಾಧಿ ಪಟ್ಟಿಯಲ್ಲಿರುವವರು ನ್ಯಾಯಾಧೀಶರಾಗಿ ನಿಯಮಿಸಲ್ಪಟ್ಟಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ;

ಆ) *ಅಂಥವರ ಬಗ್ಗೆ ಸರ್ಕಾರವು ಮರು ಪರಿಶೀಲನೆ ನಡೆಸುವುದೇ?*

ಶ್ರೀ ಜೆ.ಹೆಚ್. ಪಟೇಲ್ (ಮುಖ್ಯ ಮಂತ್ರಿಗಳು) :

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.